ಕರ್ನಾಟಕ ಸರ್ಕಾರ

## ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು.

ಸಂಖ್ಯೆ:ಸಿ5[4]ಶಿಕ್ಷಣ ಅದಾಲತ್:17:2013-14 ದಿನಾಂಕ:19ನೇ ಸೆಪ್ಟಂಬರ್ 2013

## : ಜ್ಞಾ ಪ ನ :

**ವಿಷಯ**: 2013-14ನೇ ಸಾಲಿನಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಶಿಕ್ಷಣ ಅದಾಲತ್ ಕಾರ್ಯಕ್ರಮವನ್ನು ಏರ್ಪಡಿಸುವ ಬಗ್ಗೆ.

**ಉಲ್ಲೇಖ**: ಈ ಕಛೇರಿ ಜ್ಞಾಪನಾ ಸಂಖ್ಯೆ ಸಿ5(4) ಶಿಕ್ಷಣ ಅದಾಲತ್ 77/2011-12 ದಿನಾಂಕ 31-12-2011

*****

ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ 2011-12ನೇ ಸಾಲಿನಲ್ಲಿ ಶಿಕ್ಷಣ ಅದಾಲತ್ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು ಸದರಿ ಕಾರ್ಯಕ್ರಮವು ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಅಧಿಕಾರಿ/ನೌಕರರ ಸಹಕಾರದಿಂದ ಯಶಸ್ವಿಯಾಗಿರುವುದು ತಮಗೆಲ್ಲರಿಗೂ ತಿಳಿದ ವಿಷಯವಾಗಿರುತ್ತದೆ.

ಅದೇ ರೀತಿ 2013-14ನೇ ಸಾಲಿನಲ್ಲಿಯೂ ಶಿಕ್ಷಣ ಅದಾಲತ್ ಕಾರ್ಯಕ್ರಮವನ್ನು ಬೆಂಗಳೂರು ಆಯುಕ್ತಾಲಯದ ವ್ಯಾಪ್ತಿಗೆ ಬರುವ ಎಲ್ಲಾ ಶೈಕ್ಷಣಿಕ ಜಿಲ್ಲೆಗಳಲ್ಲಿ ಹಮ್ಮಿಕೊಳ್ಳಲು ಉತ್ಸುಕರಾಗಿದ್ದೇವೆ. ಆಯಾ ಜಿಲ್ಲಾ ಉಪನಿರ್ದೇಶಕರು ತಮ್ಮ ಜಿಲ್ಲೆಯ ವ್ಯಾಪ್ತಿಗೆ ಬರುವಂತಹ ಉಪನಿರ್ದೇಶಕರ ಕಛೇರಿ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಗಳಲ್ಲಿ ಬಾಕಿ ಇರುವ ಕಡತಗಳನ್ನು ನಿಯಮಾನುಸಾರ ಪರಿಶೀಲಿಸಿ, ತ್ವರಿತವಾಗಿ ಕ್ರಮತೆಗೆದುಕೊಳ್ಳಲು ತಿಳಿಸಿದೆ. ಸದರಿ ಶಿಕ್ಷಣ ಅದಾಲತ್ ಕಾರ್ಯಕ್ರಮವನ್ನು ಕೆಳಕಂಡ ಶೈಕ್ಷಣಿಕ ಜಿಲ್ಲೆಗಳಲ್ಲಿ ಹಮ್ಮಿಕೊಳ್ಳುವಂತೆ ತಿಳಿಸಲಾಗಿದೆ. ಈ ಶಿಕ್ಷಣ ಅದಾಲತ್‌ಗೆ ಆಯುಕ್ತರು ಖುದ್ದಾಗಿ ಹಾಜರಿದ್ದು, ಕಡತಗಳನ್ನು ವಿಲೇವಾರಿ ಮಾಡುವುದಲ್ಲದೇ, ಸಾರ್ವಜನಿಕರಿಂದ ಬರುವಂತಹ ಅಹವಾಲುಗಳ ಬಗ್ಗೆ ಸ್ಥಳದಲ್ಲಿಯೇ ಸೂಕ್ತ ಕ್ರಮ ಕೈಗೊಳ್ಳಲಾಗುವುದು.

| ಕ್ರ. ಸಂ. | ಜಿಲ್ಲೆಯ ಹೆಸರು | ಶಿಕ್ಷಣ ಅದಾಲತ್ ದಿನಾಂಕ | ನೋಡಲ್ ಅಧಿಕಾರಿಯ ಹೆಸರು |
|---|---|---|---|
| 01. | ದಾವಣಗೆರೆ | 07.11.2013 | ಸಹನಿರ್ದೇಶಕರು (ಮಧ್ಯಾಹ್ನ ಉಪಹಾರ ಯೋಜನೆ) , ಬೆಂಗಳೂರು. |
| 02. | ಚಿತ್ರದುರ್ಗ | 08.11.2013 | ಸಹನಿರ್ದೇಶಕರು, ಸಾ.ಶಿ.ಇಲಾಖೆ, ಬೆಂಗಳೂರು ವಿಭಾಗ, ಬೆಂಗಳೂರು. |
| 03. | ಮೈಸೂರು | 22.11.2013 | ನಿರ್ದೇಶಕರು, ಆರ್.ಎಂ.ಎಸ್.ಎ, ಬೆಂಗಳೂರು |
| 04. | ಮಂಡ್ಯ | 23.11.2013 | ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪಠ್ಯ ಪುಸ್ತಕ ಸಂಘ, ಬೆಂಗಳೂರು. |
| 05. | ಚಾಮರಾಜನಗರ | 28.11.2013 | ನಿರ್ದೇಶಕರು, ಆರ್.ಎಂ.ಎಸ್.ಎ, ಬೆಂಗಳೂರು |
| 06. | ಕೊಡಗು | 29.11.2013 | ಸಹನಿರ್ದೇಶಕರು [ಶಾಲಾ ಶಿಕ್ಷಣ], ಆಯುಕ್ತರ ಕಛೇರಿ, ಸಾ.ಶಿ.ಇಲಾಖೆ, ಬೆಂಗಳೂರು. |
| 07. | ಹಾಸನ | 03.12.2013 | ಸಹನಿರ್ದೇಶಕರು, ಡಿ.ಎಸ್.ಇ.ಆರ್.ಟಿ., ಬೆಂಗಳೂರು. |
| 08. | ಚಿಕ್ಕಮಗಳೂರು | 05.12.2013 | ನಿರ್ದೇಶಕರು, ಅಲ್ಪಸಂಖ್ಯಾತ ಭಾಷಾ ಶಾಲೆಗಳ ನಿರ್ದೇಶನಾಲಯ, ಬೆಂಗಳೂರು. |
| 09. | ಉಡುಪಿ | 12.12.2013 | ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ, ಬೆಂಗಳೂರು. |
| 10. | ದಕ್ಷಿಣ ಕನ್ನಡ | 13.12.2013 | ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ, ಬೆಂಗಳೂರು. |
| 11. | ಶಿವಮೊಗ್ಗ | 20.12.2013 | ಸಹನಿರ್ದೇಶಕರು-1, ಸಾ.ಶಿ.ಇಲಾಖೆ, ಮೈಸೂರು ವಿಭಾಗ, ಮೈಸೂರು. |
| 12. | ಚಿಕ್ಕಬಳ್ಳಾಪುರ | 27.12.2013 | ನಿರ್ದೇಶಕರು [ಪ್ರಾಥಮಿಕ ಶಿಕ್ಷಣ], ಆಯುಕ್ತರ ಕಛೇರಿ, ಸಾ.ಶಿ.ಇಲಾಖೆ, ಬೆಂಗಳೂರು. |
| 13. | ಕೋಲಾರ | 28.12.2013 | ನಿರ್ದೇಶಕರು [ಪ್ರಾಥಮಿಕ ಶಿಕ್ಷಣ], ಆಯುಕ್ತರ ಕಛೇರಿ, ಸಾ.ಶಿ.ಇಲಾಖೆ, ಬೆಂಗಳೂರು. |
| 14. | ತುಮಕೂರು | 08.01.2014 | ಅಪರ ಆಯುಕ್ತರು [ಆಡಳಿತ], ಆಯುಕ್ತರ ಕಛೇರಿ, ಸಾ.ಶಿ.ಇಲಾಖೆ, ಬೆಂಗಳೂರು. |
| 15. | ಮಧುಗಿರಿ | 09.01.2014 | ಅಪರ ಆಯುಕ್ತರು [ಆಡಳಿತ], ಆಯುಕ್ತರ ಕಛೇರಿ, ಸಾ.ಶಿ.ಇಲಾಖೆ, ಬೆಂಗಳೂರು. |
| 16. | ರಾಮನಗರ | 16.01.2014 | ನಿರ್ದೇಶಕರು, [ಇತರೆ ಪರೀಕ್ಷೆಗಳು], ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು. |

| | | | |
|---|---|---|---|
| 17. | ಬೆಂಗಳೂರು ಉತ್ತರ | 22.01.2014 | ನಿರ್ದೇಶಕರು [ಪ್ರೌಢ ಶಿಕ್ಷಣ], ಆಯುಕ್ತರ ಕಛೇರಿ, ಸಾ.ಶಿ.ಇಲಾಖೆ, ಬೆಂಗಳೂರು. |
| 18. | ಬೆಂಗಳೂರು ಗ್ರಾಮಾಂತರ | 24.01.2014 | ನಿರ್ದೇಶಕರು, [ಇತರೆ ಪರೀಕ್ಷೆಗಳು], ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು. |
| 19. | ಬೆಂಗಳೂರು ದಕ್ಷಿಣ | 29.01.2014 | ನಿರ್ದೇಶಕರು [ಪ್ರೌಢ ಶಿಕ್ಷಣ], ಆಯುಕ್ತರ ಕಛೇರಿ, ಸಾ.ಶಿ.ಇಲಾಖೆ, ಬೆಂಗಳೂರು. |

ಆಯಾ ಜಿಲ್ಲೆಯ ಉಪನಿರ್ದೇಶಕರು ಈ ತಕ್ಷಣದಿಂದ ತಮ್ಮ ಜಿಲ್ಲೆಯ ವ್ಯಾಪ್ತಿಗೆ ಬರುವ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಗಳಲ್ಲಿ ಬಾಕಿ ಇರುವ ಕಡತಗಳ ವಿಲೇವಾರಿ ಬಗ್ಗೆ ತ್ವರಿತ ಕ್ರಮ ಕೈಗೊಳ್ಳುವುದು. ಹಾಗೆಯೇ ಉಪನಿರ್ದೇಶಕರುಗಳ ಕಛೇರಿಗಳಲ್ಲಿ ಬಾಕಿ ಇರುವಂತಹ ಕಡತಗಳನ್ನು ನಿಯಮಾನುಸಾರ ವಿಲೇವಾರಿಗೆ ಕ್ರಮವಹಿಸಲು ತಿಳಿಸಿದೆ. ಈ ಕಛೇರಿಯಿಂದ ಬಾಕಿ ಇರುವಂತಹ ಕಡತಗಳ ಬಗ್ಗೆ ತಖ್ತೆಯನ್ನು ತಯಾರಿಸಿ, ಸಂಬಂಧಿಸಿದ ಓರ್ವ ಅಧೀಕ್ಷಕರ ಮುಖೇನ ದಿನಾಂಕ:31.10.2013ಇರೊಳಗಾಗಿ ತಲುಪಿಸುವಂತೆ ತಿಳಿಸಿದೆ. ಯಾವುದೇ ಕಾರಣಕ್ಕೂ ಅನಗತ್ಯವಾಗಿ ಕಡತಗಳು ಬಾಕಿ ಇರದಂತೆ ಸೂಕ್ತ ಕ್ರಮವಹಿಸಲು ತಿಳಿಸಿದೆ.

ಸರ್ಕಾರ ದಿನಾಂಕ:14.12.2011ರಂದು ಪ್ರತಿ ಶೈಕ್ಷಣಿಕ ಜಿಲ್ಲೆಗೆ ನೋಡಲ್ ಅಧಿಕಾರಿಯನ್ನಾಗಿ ನೇಮಿಸಿರುವ ಅಧಿಕಾರಿಗಳನ್ನೇ ಶಿಕ್ಷಣ ಅದಾಲತ್ ಕಾರ್ಯಕ್ರಮಕ್ಕೆ ನೋಡಲ್ ಅಧಿಕಾರಿಗಳನ್ನಾಗಿ ನೇಮಕ ಮಾಡಲಾಗಿದೆ. ಸದರಿ ಅಧಿಕಾರಿಗಳು ನಿಗದಿಪಡಿಸಿರುವ ಆಯಾ ಜಿಲ್ಲೆಗಳ ಶಿಕ್ಷಣ ಅದಾಲತ್ ಕಾರ್ಯಕ್ರಮದ ದಿನಾಂಕಕ್ಕಿಂತ ಮುನ್ನವೇ ಆಯಾ ಜಿಲ್ಲೆಗಳಿಗೆ ಭೇಟಿ ನೀಡಿ, ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಉಪನಿರ್ದೇಶಕರು ಶಿಕ್ಷಣ ಅದಾಲತ್ ಕಾರ್ಯಕ್ರಮದ ಬಗ್ಗೆ ಕೈಗೊಂಡಿರುವ ಕ್ರಮದ ಬಗ್ಗೆ ವಿಮರ್ಶಿಸಿ ಪರಿಪೂರ್ಣವಾದ ವರದಿಯನ್ನು ಅದಾಲತ್ ದಿನಾಂಕದಂದು ಆಯುಕ್ತರಿಗೆ ನೀಡುವಂತೆ ತಿಳಿಸಿದೆ.

ಮೇಲೆ ಕೈಗೊಳ್ಳಲಾದ ಶಿಕ್ಷಣ ಅದಾಲತ್ ಕಾರ್ಯಕ್ರಮ ನಿಗದಿಪಡಿಸಿದ ದಿನಾಂಕಗಳಲ್ಲಿ ಬೆಳಿಗ್ಗೆ 9.00 ರಿಂದ ಮಧ್ಯಾಹ್ನ 2.00 ಗಂಟೆಯವರೆಗೆ ಬಾಕಿ ಇರುವ ಕಡತಗಳನ್ನು ವಿಲೇವಾರಿಗಾಗಿ ಕ್ರಮ ಕೈಗೊಳ್ಳಲು ಸಮಯ ನಿಗದಿಪಡಿಸಲಾಗಿದೆ. ಈ ಹಿನ್ನೆಲೆಯಲ್ಲಿ ಅಂದು ಸಾರ್ವಜನಿಕರಿಗೆ ಹಾಗೂ ಆಡಳಿತ ಮಂಡಳಿಯವರಿಗೆ ಆಯುಕ್ತರಿಗೆ ಅರ್ಜಿಗಳನ್ನು ನೀಡುವ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, ಆಯಾ ಜಿಲ್ಲೆಯಲ್ಲಿ ವ್ಯಾಪಕ ಪ್ರಚುರ ಪಡಿಸಲು ಕ್ರಮಕೈಗೊಳ್ಳಲು ತಿಳಿಸಿದೆ.

ಈ ಬಗ್ಗೆ ಕೈಗೊಂಡಿರುವ ಕ್ರಮದ ವರದಿಯನ್ನು ***ದಿ:31.10.2013ರೊಳಗಾಗಿ ಶ್ರೀ ಹೆಚ್.ಎಸ್.ರಾಮರಾವ್, ಅಪರ ಆಯುಕ್ತರು[ಆಡಳಿತ]ಹೆ.ಪ್ರ. ಆಯುಕ್ತರ ಕಛೇರಿ, ಸಾ.ಶಿ.ಇಲಾಖೆ, ಬೆಂಗಳೂರು,*** ಇವರಿಗೆ ಸಲ್ಲಿಸಲು ತಿಳಿಸಿದೆ.

*[ಮೊಹಮ್ಮದ್ ಮೊಹಸೀನ್]*
ಆಯುಕ್ತರು
19.9.13

***ಇವರಿಗೆ:***

01. ಅಪರ ಆಯುಕ್ತರು[ಆಡಳಿತ], ಆಯುಕ್ತರ ಕಛೇರಿ, ಸಾ.ಶಿ.ಇಲಾಖೆ, ಬೆಂಗಳೂರು.
02. ನಿರ್ದೇಶಕರು [ಪ್ರೌಢ ಶಿಕ್ಷಣ], ಆಯುಕ್ತರ ಕಛೇರಿ, ಸಾ.ಶಿ.ಇಲಾಖೆ, ಬೆಂಗಳೂರು.
03. ನಿರ್ದೇಶಕರು [ಪ್ರಾಥಮಿಕ ಶಿಕ್ಷಣ], ಆಯುಕ್ತರ ಕಛೇರಿ, ಸಾ.ಶಿ.ಇಲಾಖೆ, ಬೆಂಗಳೂರು.
04. ನಿರ್ದೇಶಕರು, [ಇತರೆ ಪರೀಕ್ಷೆಗಳು], ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು.
05. ನಿರ್ದೇಶಕರು, ಅಲ್ಪಸಂಖ್ಯಾತ ಭಾಷಾ ಶಾಲೆಗಳ ನಿರ್ದೇಶನಾಲಯ, ಬೆಂಗಳೂರು.
06. ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ, ಬೆಂಗಳೂರು.
07. ನಿರ್ದೇಶಕರು, ಆರ್.ಎಂ.ಎಸ್.ಎ, ಬೆಂಗಳೂರು.
08. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪಠ್ಯ ಪುಸ್ತಕ ಸಂಘ, ಬೆಂಗಳೂರು.
09. ಸಹನಿರ್ದೇಶಕರು, ಡಿ.ಎಸ್.ಇ.ಆರ್.ಟಿ., ಬೆಂಗಳೂರು.
10. ಸಹನಿರ್ದೇಶಕರು [ಶಾಲಾ ಶಿಕ್ಷಣ], ಆಯುಕ್ತರ ಕಛೇರಿ, ಸಾ.ಶಿ.ಇಲಾಖೆ, ಬೆಂಗಳೂರು.
11. ಸಹನಿರ್ದೇಶಕರು, ಸಾ.ಶಿ.ಇಲಾಖೆ, ಬೆಂಗಳೂರು ವಿಭಾಗ, ಬೆಂಗಳೂರು.
12. ಸಹನಿರ್ದೇಶಕರು, ಸಾ.ಶಿ.ಇಲಾಖೆ, ಮೈಸೂರು ವಿಭಾಗ, ಮೈಸೂರು.
13. ಬೆಂಗಳೂರು ಮತ್ತು ಮೈಸೂರು ವಿಭಾಗದ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳಿಗೆ.
14. ಬೆಂಗಳೂರು ಮತ್ತು ಮೈಸೂರು ವಿಭಾಗದ ಎಲ್ಲಾ ಡಯಟ್ ಪ್ರಾಂಶುಪಾಲರುಗಳಿಗೆ.
15. ಬೆಂಗಳೂರು ಮತ್ತು ಮೈಸೂರು ವಿಭಾಗದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ.
16. ಈ ಕಛೇರಿಯ ಎಲ್ಲಾ ಶಾಖಾಧಿಕಾರಿಗಳು ಹಾಗೂ ಅಧೀಕ್ಷಕರುಗಳಿಗೆ.
17. ಆಪ್ತ ಕಾರ್ಯದರ್ಶಿಗಳು, ಆಯುಕ್ತರ ಆಪ್ತ ಶಾಖೆ, ಆಯುಕ್ತರ ಕಛೇರಿ, ಸಾ.ಶಿ.ಇಲಾಖೆ, ಬೆಂಗಳೂರು. \\Typi